(ಆ) ಉದ್ಭವಿಸುವುದಿಲ್ಲ.

(ಇ) ಉದ್ಭವಿಸುವುದಿಲ್ಲ.

662 (286) ಶ್ರೀ ಪಾಟೀಲ್ ಎಸ್. ಎಸ್. (ಮುಂಡರಗಿ) :– ವೈದ್ಯಕೀಯ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

(ಅ) ಹುಬ್ಬಳ್ಳಿಯ ಕೆ.ಎಂ.ಸಿ. ಆಸ್ಪತ್ರೆ ಎಷ್ಟು ಹಾಸಿಗೆಯುಳ್ಳದ್ದು ;

(ಆ) ಹಾಸಿಗೆಗಳಿಗಿಂತಲೂ ಹೆಚ್ಚಿನ ರೋಗಿಗಳು ಒಳ ರೋಗಿಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಹಾಸಿಗೆಗಳಿಗಿಂತಲೂ ಎಷ್ಟು ಹೆಚ್ಚಿನ ರೋಗಿಗಳನ್ನೂ ಒಳ ರೋಗಿಗಳಾಗಿ ತೆಗೆದುಕೊಳ್ಳಲಾಗಿದೆ ;

(ಈ) ಹಾಗಿದ್ದಲ್ಲಿ, ಹೆಚ್ಚಿನ ರೋಗಿಗಳಿಗೆ ಯಾವ ರೀತಿಯ ವ್ಯವಸ್ಥೆಯನ್ನು ಮಾಡಲಾಗಿದೆ (ವಿವರ ನೀಡುವುದು) ;

(ಉ) ಹೆಚ್ಚಿನ ಹಾಸಿಗೆಯುಳ್ಳ ಆಸ್ಪತ್ರೆಯನ್ನು ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದೇ ?

ಶ್ರೀ ವಿ.ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು) :–

(ಅ) 790

(ಆ) ಬಂದಿದೆ.

(ಇ) ಸುಮಾರು 200

(ಈ) ಈಗಿರುವ ಸುಮಾರು 200 ಹೆಚ್ಚಿನ ರೋಗಿಗಳಿಗೆ ಇರುವ ಸ್ಥಳದಲ್ಲಿ ನೆಲದ ಮೇಲೆ ಬೆಡ್ ಮತ್ತು ಹೊದಿಕೆಗಳ ತಾತ್ಕಾಲಿಕ ವ್ಯವಸ್ಥೆ ಮಾಡಲಾಗಿದೆ.

(ಉ) 300 ಹಾಸಿಗೆಗಳನ್ನು ಹೆಚ್ಚಿಸುವ ಯೋಜನೆ ಸರ್ಕಾರದ ಪರಿಶೀಲನೆಯಲ್ಲಿದೆ.

663 (635) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) :– ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

(ಅ) ಮೇಲ್ದರ್ಜೆಗೇರಿಸಿದ ಬೆಳ್ತಂಗಡಿ ತಾಲ್ಲೂಕು ಆಸ್ಪತ್ರೆಗೆ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; ಇಲ್ಲವಾದಲ್ಲಿ ಆ ಕುರಿತು ಕೈಗೊಂಡ ಕ್ರಮಗಳೇನು ;

(ಆ) ಗ್ರಾಮಾಂತರ ಪ್ರದೇಶಗಳಿಂದ ಕೂಡಿದ ಬೆಳ್ತಂಗಡಿ ತಾಲ್ಲೂಕು ಆಸ್ಪತ್ರೆಗೆ ಆದ್ಯತೆ ಮೇರೆಗೆ ಮೂಲಸೌಕರ್ಯಗಳನ್ನು ಒದಗಿಸಿಕೊಡಲು ಸರಕಾರ ಕ್ರಮ ಕೈಗೊಳ್ಳುವುದೇ ?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :-

(ಅ) ಬೆಳ್ತಂಗಡಿ ತಾಲ್ಲೂಕು ಆಸ್ಪತ್ರೆಯನ್ನು 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದ್ದು ಕಟ್ಟಡ ಕಾಮಗಾರಿಯನ್ನು 2006-2007ನೇ ಸಾಲಿನಲ್ಲಿ ಕೈಗೊಳ್ಳಲು ಕ್ರಮ ವಹಿಸಲಾಗಿದೆ. ಕಾಮಗಾರಿ ಪೂರ್ಣಗೊಂಡ ನಂತರ ಈಗಾಗಲೇ ಮಂಜೂರಾಗಿರುವ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

(ಆ) ಆದ್ಯತೆ ಮೇರೆಗೆ ಮೂಲ ಸೌಕರ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

664 (636) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ):- ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

(ಅ) ಬೆಳ್ತಂಗಡಿ ತಾಲ್ಲೂಕು ಮಾಲಾಡಿ ಎಂಬಲ್ಲಿರುವ ಐಟಿಐ ಸಂಸ್ಥೆಗೆ ಸ್ವಂತ ಕಟ್ಟಡ ನಿರ್ಮಾಣದ ಬಗೆಗಿನ ವಿವರಗಳೇನು ;

(ಆ) 2006-07 ಮತ್ತು 2007-08ನೇ ಸಾಲಿನಲ್ಲಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ; ಕಟ್ಟಡ ನಿರ್ಮಾಣಕ್ಕಾಗಿ ನಿಗಧಿಪಡಿಸಲಾದ ಅಂದಾಜು ಮೊತ್ತ ಎಷ್ಟು ;

(ಇ) ಕಟ್ಟಡ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು? ಹಾಗೂ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸಲು ನಿಗದಿಪಡಿಸಲಾದ ಕಾಲಮಿತಿ ಎಷ್ಟು ? (ವಿವರ ಒದಗಿಸುವುದು)

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :-

(ಅ) ಕಟ್ಟಡದ ನಕ್ಷೆ ಅನುಮೋದನೆಯಾಗಿರುತ್ತದೆ. ಅಂದಾಜು ಪಟ್ಟಿ ತಯಾರಿಸಲಾಗಿದೆ.

(ಆ) ಈ ಸಂಸ್ಥೆಗೆ ಬಿಡುಗಡೆ ಮಾಡಲಾಗಿಲ್ಲ.

ರೂ. 370.00 ಲಕ್ಷ.

(ಇ) ಹೆಚ್ಚಿನ ಆಯವ್ಯಯ ದೊರೆತ ತಕ್ಷಣ ಕಾಮಗಾರಿ ಪ್ರಾರಂಭಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

667 (814) ಶ್ರೀ ರಮೇಶ್‌ಕುಮಾರ್ ಕೆ.ಆರ್. (ಶ್ರೀನಿವಾಸಪುರ) :- ಮಾನ್ಯ ಪಶುಸಂಗೋಪನಾ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

(ಅ) ರಾಜ್ಯದಲ್ಲಿ ಕುರಿ ಸಾಕಾಣಿಕೆಗೆ ಯಾವುದಾದರೂ ವಿಶೇಷ ಕಾರ್ಯಕ್ರಮವನ್ನು ಕೈಗೊಂಡಿದೆಯೆ ;

(ಆ) ಕುರಿ ಸಾಕಾಣಿಕೆಗೆ ವಿಮಾ ಯೋಜನೆ ಜಾರಿಯಲ್ಲಿದೆಯೇ ;